© www.coastalhut.com

**ಕರ್ನಾಟಕ ಸರ್ಕಾರ**
**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/01/ಅಉಆ/2017-18/ನೇವಿ-1

ಕಾಲೇಜು ಶಿಕ್ಷಣ ಆಯುಕ್ತರಕಛೇರಿ,
ಬೆಂಗಳೂರು, ದಿನಾಂಕ: 23.06.2017.

# ಸುತ್ತೋಲೆ

**ವಿಷಯ:** 2017-18ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರುಗಳನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

**ಉಲ್ಲೇಖ:** 1) ದಿನಾಂಕ:22.05.2017ರ ಈ ಕಛೇರಿ ಸಮಸಂಖ್ಯೆ ಪತ್ರ.
2)ಸರ್ಕಾರದ ಪತ್ರ ಸಂಖ್ಯೆ ಇಡಿ 121 :ಡಿಸಿಇ:2017, ದಿನಾಂಕ:21.06.2017 .
3) ಕಾಶಿಇ/44/ಅಉನೇ/2012-13/ನೇಪಾವಿ-1, ದಿನಾಂಕ: 02.07.2013ರ ಈ ಕಛೇರಿ ಸುತ್ತೋಲೆ.
4) ಕಾಶಿಇ/12/ಅಉನೇ/2014-15/ನೇವಿ-1, ದಿನಾಂಕ: 14.07.2014ರ ಈ ಕಛೇರಿ ಸುತ್ತೋಲೆ.

******

ಉಲ್ಲೇಖ(2)ರ ಸರ್ಕಾರಿ ಪತ್ರದಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2017-18ನೇ ಶೈಕ್ಷಣಿಕ ಸಾಲಿನಲ್ಲಿ ಲಭ್ಯವಿರುವ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ಉಲ್ಲೇಖ(1)ರ ಇಲಾಖೆಯ ಪ್ರಸ್ತಾವನೆಯಲ್ಲಿ ತಿಳಿಸಿರುವಂತೆ ಹಾಗೂ ಈ ಕೆಳಕಂಡ ಷರತ್ತುಗಳನ್ವಯ ಅತಿಥಿ ಉಪನ್ಯಾಸಕರುಗಳನ್ನು ಆಯ್ಕೆ ಮಾಡಿಕೊಳ್ಳಲು ಸರ್ಕಾರದ ಅನುಮತಿ ನೀಡಲಾಗಿದೆ ಎಂದು ಸೂಚಿಸಿದ್ದು, ಷರತ್ತುಗಳು ಈ ಕೆಳಗಿನಂತಿವೆ.

1) ಅತಿಥಿ ಉಪನ್ಯಾಸಕರ ಆಯ್ಕೆಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿ ಪಾರದರ್ಶಕವಾಗಿ ಆಯ್ಕೆ ಮಾಡುವುದು.
2) 2017-2018ನೇ ಶೈಕ್ಷಣಿಕ ಸಾಲಿಗೆ ಖಾಯಂ ಉಪನ್ಯಾಸಕರಿಗೆ ಬೋಧನಾ ಕಾರ್ಯಭಾರ ಹಂಚಿಕೆ ಮಾಡಿ ಉಳಿಯುವ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು 2017-18ನೇ ಶೈಕ್ಷಣಿಕ ಸಾಲಿಗೆ ತಾತ್ಕಾಲಿಕವಾಗಿ ಮಾತ್ರ ಅತಿಥಿ ಉಪನ್ಯಾಸಕರನ್ನು ಹಿಂದಿನ ಶೈಕ್ಷಣಿಕ ಸಾಲುಗಳಲ್ಲಿ ಆಯ್ಕೆ ಮಾಡಿಕೊಂಡಿರುವಂತೆ ಆಯ್ಕೆ ಮಾಡಿಕೊಳ್ಳುವುದು.
3) ಸೇವಾ ಜೇಷ್ಠತೆ, ನಿಗಧಿತ ವಿದ್ಯಾರ್ಹತೆ ಹಾಗೂ ನಿಗಧಿಪಡಿಸಿರುವ ಮಾನದಂಡಗಳನ್ನು ಅನುಸರಿಸಿ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವುದು

ಉಲ್ಲೇಖ(2)ರ ಸರ್ಕಾರದ ಪತ್ರದಲ್ಲಿ ಉಲ್ಲೇಖ(1)ರ ಇಲಾಖೆಯ ಪ್ರಸ್ತಾವನೆಯಲ್ಲಿ ತಿಳಿಸಿರುವ ಅಂಶಗಳನ್ನು ಸರ್ಕಾರ ಒಪ್ಪಿರುವ ಹಿನ್ನೆಲೆಯಲ್ಲಿ ಅವುಗಳ ವಿವರಗಳು ಈ ಕೆಳಕಂಡಂತಿವೆ.

2017-18ನೇ ಶೈಕ್ಷಣಿಕ ಸಾಲಿನಲ್ಲಿ ಪ್ರಥಮ ದರ್ಜೆ ಕಾಲೇಜುಗಳಿಗೆ ಅಗತ್ಯವಿರುವ ಅತಿಥಿ ಉಪನ್ಯಾಸಕರುಗಳನ್ನು ಆನ್‌ಲೈನ್ ಮೂಲಕ ಪಡೆದ ಅರ್ಜಿಗಳಲ್ಲಿನ ವಿವರಗಳನ್ನು ಆಧರಿಸಿ ಈ ಕೆಳಗಿನ ಕೋಷ್ಟಕದಲ್ಲಿ ತಿಳಿಸಿರುವ ವಿದ್ಯಾರ್ಹತೆ ಆಧಾರದ ಮೇರೆಗೆ ಪ್ರತಿಭಾ ಪಟ್ಟಿಯನ್ನು (Merit List) ತಯಾರಿಸಲು ಕ್ರಮವಹಿಸಲಾಗುವುದು.

© www.coastalhut.com

[redacted]

| ಕ್ರಮ ಸಂಖ್ಯೆ | ವಿದ್ಯಾರ್ಹತೆ | | ಗರಿಷ್ಠ ಅಂಕಗಳು |
|---|---|---|---|
| ಅ) | ಸಾಮಾನ್ಯ ವಿದ್ಯಾರ್ಹತೆ:<br>ಅಭ್ಯರ್ಥಿಯು ಎರಡು ವರ್ಷ ಸ್ನಾತಕೋತ್ತರ ಪದವಿಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ 40% ನ್ನು ಗಣನೆಗೆ ತೆಗೆದುಕೊಳ್ಳುವುದು. (ಉದಾ: ಅಭ್ಯರ್ಥಿಯು ಸ್ನಾತಕೋತ್ತರ ಪದವಿಯಲ್ಲಿ ಶೇಕಡ 60 ಅಂಕ ಪಡೆದಿದ್ದಲ್ಲಿ ಅದರ ಶೇಕಡ 40ರಷ್ಟು ಭಾಗವನ್ನು ಅಂದರೆ 24 ಅಂಕಗಳು ಎಂಬುದಾಗಿ ಗಣನೆಗೆ ತೆಗೆದುಕೊಳ್ಳುವುದು). | - | 40 ಅಂಕಗಳು |
| ಆ) | 1) ಪಿಹೆಚ್.ಡಿ/ಎನ್ಇಟಿ/ಎಸ್ಎಲ್ಇಟಿ ವಿದ್ಯಾರ್ಹತೆ ಪಡೆದಿದ್ದಲ್ಲಿ | - | 30 ಅಂಕಗಳು |
| ಇ) | ಹಿಂದಿನ ವರ್ಷಗಳಲ್ಲಿ ಸರ್ಕಾರಿ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಅವಧಿಗೆ ಪ್ರತಿ ಶೈಕ್ಷಣಿಕ ವರ್ಷಕ್ಕೆ 3 ಅಂಕಗಳಂತೆ ಗರಿಷ್ಠ 10 ವರ್ಷಗಳಿಗೆ, 30 ಅಂಕಗಳು ಮಿತಿಗೊಳಿಸುವುದು (ಪ್ರತಿ ಶೈಕ್ಷಣಿಕ ವರ್ಷದ ಪೂರ್ಣ ಅವಧಿ ಸೇವೆಗೆ 3 ಅಂಕಗಳು)<br>(ಶೈಕ್ಷಣಿಕ ವರ್ಷದಲ್ಲಿ 1 ಸೆಮಿಸ್ಟರ್‌ನಲ್ಲಿ ಮಾತ್ರ ಸೇವೆ ಸಲ್ಲಿಸಿದ್ದರೆ 1.5 ಅಂಕಗಳು) | - | 30 ಅಂಕಗಳು |
| | ಒಟ್ಟು | | 100 ಅಂಕಗಳು |

ಸೂಚನೆ-1: ವಿಕಲಚೇತನ ಅಭ್ಯರ್ಥಿಗಳಿಗೆ ಆದ್ಯತೆ ನೀಡಲು 5 ಅಂಕಗಳನ್ನು ಹೆಚ್ಚುವರಿಯಾಗಿ ನೀಡುವುದು.
2: ಆಯ್ಕೆ ಹೊಂದುವ ಅಭ್ಯರ್ಥಿಗಳ ವಿದ್ಯಾರ್ಹತೆ ಪ್ರಮಾಣ ಪತ್ರಗಳು ನಕಲಿ ಎಂದು ಕಂಡುಬಂದಲ್ಲಿ ಅವರ ವಿರುದ್ಧ Criminal case ದಾಖಲಿಸಲು ಕ್ರಮವಹಿಸಲಾಗುವುದು.

ಸರ್ಕಾರಿ ಕಾಲೇಜುಗಳ ಪ್ರಾಂಶುಪಾಲರುಗಳು ಸಂಬಂಧಪಟ್ಟ ವಿಷಯದಲ್ಲಿ ಮಾತ್ರ ಅಂದರೆ ಸಮಾನಾಂತರ ವಿಷಯಗಳನ್ನು ಪರಿಗಣಿಸದೆ, ಸ್ನಾತಕೋತ್ತರ ಪದವಿಯಲ್ಲಿ ಕನಿಷ್ಠ ಶೇ.55 ಅಂಕಗಳನ್ನು ಪಡೆದಿರುವ ಅಭ್ಯರ್ಥಿಗಳನ್ನು (ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ವಿಕಲಚೇತನ ಅಭ್ಯರ್ಥಿಗಳು ಶೇ 50ಗಳನ್ನು ಪಡೆದಿರಬೇಕು) ಅತಿಥಿ ಉಪನ್ಯಾಸಕರಾಗಿ ನೇಮಕಾತಿ ಮಾಡಿಕೊಳ್ಳುವುದು.,

ಮಹಿಳಾ ಅತಿಥಿ ಉಪನ್ಯಾಸಕರು ಪ್ರಸೂತಿ ಸಂದರ್ಭದಲ್ಲಿ ಅತಿಥಿ ಉಪನ್ಯಾಸಕ ಕಾರ್ಯಕ್ಕೆ ಗೈರು ಹಾಜರಾಗಿದ್ದ, ಸಂದರ್ಭದಲ್ಲಿ ಅವರ ಕಾರ್ಯವನ್ನು ನಿರ್ವಹಿಸಲು ಬೇರೊಬ್ಬ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲು ನಿಯಮಗಳಲ್ಲಿ ಅವಕಾಶವಿದೆ. ಮಹಿಳಾ ಅತಿಥಿ ಉಪನ್ಯಾಸಕರು ಪ್ರಸೂತಿಯಿಂದ ಹಿಂದಿರುಗಿದಲ್ಲಿ ಅವರ ಸ್ಥಾನದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರನ್ನು ಸೇವೆಯಿಂದ ಕೈಬಿಟ್ಟು ಪುನಃ ಅದೇ ಮಹಿಳಾ ಅಭ್ಯರ್ಥಿಯನ್ನೇ ಮುಂದುವರೆಸಿ ಅವರ ಸೇವೆಯನ್ನು ಅದೇ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಬಳಸಿಕೊಳ್ಳಲು ಸೂಚಿಸಲಾಗಿದೆ.

ಶೈಕ್ಷಣಿಕ ವರ್ಷದ ಮಧ್ಯೆ ಭಾಗದಲ್ಲಿ ವರ್ಗಾವಣೆ/ನಿಯೋಜನೆ/ವಯೋನಿವೃತ್ತಿ/ಸ್ವಯಂ ನಿವೃತ್ತಿ/ಹೊಸ ನೇಮಕ/ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳೇ ವಿವಿಧ ಕಾರಣಗಳಿಂದ ಕರ್ತವ್ಯದಿಂದ ನಿರ್ಗಮನಿಸಿದ್ದಲ್ಲಿ/ಹೊಸ ಕೋರ್ಸ್/ಕಾಂಬಿನೇಷನ್‌ಗಳನ್ನು ಪ್ರಾರಂಭಿಸುವ ಪ್ರಯುಕ್ತ ಹೆಚ್ಚುವರಿ ಕಾರ್ಯಭಾರ ನಿರ್ವಹಿಸಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿರುವವರನ್ನೇ ಅತಿಥಿ ಉಪನ್ಯಾಸಕರಾಗಿ ಆಯ್ಕೆ ಮಾಡಿಕೊಳ್ಳತಕ್ಕದ್ದು, ಒಂದೊಮ್ಮೆ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಸೂಕ್ತ ಕಾರಣ ಮತ್ತು ದಾಖಲೆಗಳನ್ನು ಕೇಂದ್ರ ಕಛೇರಿಗೆ ಸಲ್ಲಿಸಿ, ಪ್ರತಿ ಪ್ರಕರಣಕ್ಕೆ ಸಂಬಂಧಿಸಿದಂತೆ, ಪ್ರತ್ಯೇಕವಾಗಿ ಅನುಮೋದನೆ ಪಡೆದು ಆನ್‌ಲೈನ್‌ನಲ್ಲಿ ಅರ್ಜಿಸಲ್ಲಿಸಿದ ಅರ್ಹ ಉಪನ್ಯಾಸಕರ ಸೇವೆಯನ್ನು ಬಳಸಿಕೊಳ್ಳಲು ಸೂಚಿಸಲಾಗಿದೆ.



Scanned by CamScanner

© www.coastalhut.com

ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿ, ಅರ್ಹ ಅಭ್ಯರ್ಥಿಗಳ ತಾತ್ಕಾಲಿಕ ಪ್ರತಿಭಾ ಪಟ್ಟಿಯನ್ನು ತಯಾರಿಸಿ ಕಾಲೇಜುಗಳಿಗೆ ಕಳುಹಿಸಲು ಕೇಂದ್ರ ಕಛೇರಿಯಿಂದಲೇ ಕ್ರಮವಹಿಸಲಾಗುವುದು.

ಈ ಸುತ್ತೋಲೆಯಲ್ಲಿ ಅತಿಥಿ ಉಪನ್ಯಾಸಕರ ಆಯ್ಕೆ ಸಂಬಂಧಿಸಿದಂತೆ, ಹೊರಡಿಸಲಾದ ಅಂಶಗಳೊಂದಿಗೆ ಉಲ್ಲೇಖ(3) ಮತ್ತು (4)ರ ಹಾಗೂ ಕಾಲಕಾಲಕ್ಕೆ ಹೊರಡಿಸಲಾದ ಈ ಕಛೇರಿ ಸುತ್ತೋಲೆಗಳಲ್ಲಿ ತಿಳಿಸಿರುವ ಮಾರ್ಗಸೂಚಿಗಳನ್ನು ಅನುಸರಿಸಿ, ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸಿಕೊಳ್ಳಲು ಈ ಮೂಲಕ ಎಲ್ಲಾ ಸರ್ಕಾರಿ ಪದವಿ ಕಾಲೇಜುಗಳ ಪ್ರಾಂಶುಪಾಲರಿಗೆ ಸೂಚಿಸಲಾಗಿದೆ.

23/6/17

**ಕಾಲೇಜು ಶಿಕ್ಷಣ ಆಯುಕ್ತರು**

1) ಕಾಲೇಜು ಶಿಕ್ಷಣ ಇಲಾಖೆಯ ಎಲ್ಲಾ ಜಂಟಿ ನಿರ್ದೇಶಕರುಗಳಿಗೆ- ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು:**

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರದ ಸಚಿವಾಲಯ, ಬೆಂಗಳೂರು.
2) ಜಂಟಿ ನಿರ್ದೇಶಕರು, ಶೈಕ್ಷಣಿಕ ವಿಭಾಗ, ಕಾಲೇಜು ಶಿಕ್ಷಣ ಇಲಾಖೆ, ಕೇಂದ್ರ ಕಛೇರಿ, ಬೆಂಗಳೂರು - ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3) ಕೇಂದ್ರ ಕಛೇರಿಯ ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳ ಆಪ್ತ ಸಹಾಯಕರುಗಳಿಗೆ-ಮಾಹಿತಿಗಾಗಿ
4) ಮಾಹಿತಿ ಅಧಿಕಾರಿಗಳು ಕಾಲೇಜು ಶಿಕ್ಷಣ ಇಲಾಖೆ, ಕೇಂದ್ರ ಕಛೇರಿ, ಬೆಂಗಳೂರು - ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
5) ಕೇಂದ್ರ ಕಛೇರಿಯ ಸಂಬಂಧಪಟ್ಟ ಎಲ್ಲಾ ವಿಭಾಗಗಳ ಮ್ಯಾನೇಜರ್ ಹಾಗೂ ಅಧೀಕ್ಷಕರುಗಳಿಗೆ-ಮಾಹಿತಿಗಾಗಿ
6) ಹೆಚ್ಚುವರಿ ಪ್ರತಿ.
7) ಕಛೇರಿ ಪ್ರತಿ.